ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 28 ನೇ ಸೆಪ್ಟೆಂಬರ್, 2020

ಶಿಕ್ಷಕರಿಗೆ ವಿಶೇಷ ಭತ್ಯೆ ಮಂಜೂರು ಬಗ್ಗೆ

ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :-

759 (929) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ದಿನಾಂಕ:01-08-2008 ರ ನಂತರ ನೇರ ನೇಮಕಾತಿ ಹೊಂದಿದ ಸರ್ಕಾರಿ ಮತ್ತು ಅನುದಾನಿತ ಪ್ರೌಢ ಶಾಲಾ ಶಿಕ್ಷಕರೆಷ್ಟು ; ಅನುದಾನಿತ ಪದವಿ ಪೂರ್ವ ಉಪನ್ಯಾಸಕರ ಸಂಖ್ಯೆ ಎಷ್ಟು ;

(ಆ) ಸದರಿ ಶಿಕ್ಷಕರು ಹಾಗೂ ಉಪನ್ಯಾಸಕರಿಗೆ ವಿಶೇಷ ಭತ್ಯೆಯು ಮಂಜೂರಾಗದೆ ತಾರತಮ್ಯವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈಗಾಗಲೇ ಸದರಿ ಶಿಕ್ಷಕರು ಮತ್ತು ಉಪನ್ಯಾಸಕರಿಗೆ ಮಂಜೂರಾಗಿರುವ ವಿಶೇಷ ಭತ್ಯೆಯನ್ನು ವಸೂಲು ಮಾಡುವಂತೆ ಸರ್ಕಾರವು ಉದ್ದೇಶಿಸಿರುವುದು ಎಷ್ಟು ಸಮಂಜಸ ;

(ಈ) ಘನತೆವೆತ್ತ ನ್ಯಾಯಾಲಯ ಮತ್ತು ಕರ್ನಾಟಕ ಮೇಲ್ಮನವಿ ನ್ಯಾಯ ಮಂಡಳಿಯಿಂದ ದಿನಾಂಕ:01-08-2008 ರ ನಂತರ ನೇಮಕಾತಿಗೊಂಡ ಶಿಕ್ಷಕರು ಹಾಗೂ ಉಪನ್ಯಾಸಕರುಗಳಿಗೆ ವಿಶೇಷ ಭತ್ಯೆ ನೀಡುವುದು ಸಮಂಜಸ ಎಂದು ಹೇಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಹಾಗಿದ್ದಲ್ಲಿ, ಸರ್ಕಾರವು ಸದರಿ ಶಿಕ್ಷಕರು ಮತ್ತು ಉಪನ್ಯಾಸಕರಿಗೆ ಮಂಜೂರಾಗಿರುವ ವಿಶೇಷ ಭತ್ಯೆಯನ್ನು ಯಾವಾಗಿನಿಂದ ಮುಂದುವರೆಸಲಾಗುವುದು ? (ಪೂರ್ಣ ಮಾಹಿತಿ ನೀಡುವುದು)